ಸದರಿ ಅವಧಿಯನ್ನು ರಜೆ ಎಂದು ಸಕ್ರಮಗೊಳಿಸಲಾಗಿರುತ್ತದೆ. ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗಳು ನಡೆಯುವ ಸಂದರ್ಭದಲ್ಲಿ ಹಾಗೂ ಸದರಿ ಆಸ್ಪತ್ರೆಯ ಕೆಲಸ ವೇಳೆಯಲ್ಲಿ ಇವರು ಹಾಜರಿರುತ್ತಾರೆ ಹಾಗು ಇವರ ಸೇವೆ ಸಹ ಅವಶ್ಯವೆನಿಸಿದಾಗ ಲಭ್ಯವಿರುತ್ತದೆ. ಕೆಲಸದ ವೇಳೆಯಲ್ಲಿ ಕಾರ್ಯಸ್ಥಾನದಲ್ಲಿ ಇಲ್ಲದಿರುವ ಮುಂತಾದ ಸಣ್ಣಪುಟ್ಟ ಆಕ್ಷಪಣೆಗಳಿಗೆ ಸಂಬಂಧಪಟ್ಟಂತೆ ಈ ವೈದ್ಯರಿಗೆ ಜಿಲ್ಲಾ ಶಸ್ತ್ರ ಚಿಕಿತ್ಸಕರು ಸಕಾಲಿಕ ತಿಳುವಳಿಕೆ ಮತ್ತು ಎಚ್ಚರಿಕೆಗಳನ್ನು ಕೊಟ್ಟಿರುತ್ತಾರೆ. ಇಂತಹ ನಡವಳಿಕೆಯನ್ನು ಮುಂದುವರಿಸಿದಲ್ಲಿ ತೀವ್ರ ಶಿಸ್ತುಕ್ರಮ ಕೈಗೊಳ್ಳಲಾಗುವುದು.

ಚುನಾವಣಾ ಪ್ರಸ್ತಾವ

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : 1976ನೇ ಇಸವಿಯ ಕರ್ನಾಟಕ ರಾಜ್ಯ ವಿಶ್ವ ವಿದ್ಯಾನಿಲಯಗಳ ಶಾಸನದ 21(1) (14)ನೇ ಕಲಮಿನ ಮೇರೆಗೆ ಅವಶ್ಯ ಪಡಿಸಿರುವಂತೆ ಏಕಲ ಸಂಕ್ರಮಣೀಯ ಮತದ ಮೂಲಕ ಅನುಪಾತ ಪ್ರಾತಿನಿಧ್ಯದ ನೀತಿಗೆ ಅನುಸಾರವಾಗಿ ಈ ಸಭೆಯು ಕರ್ನಾಟಕ ವಿಶ್ವವಿದ್ಯಾನಿಲಯದ ಸೆನೆಟ್‌ಗೆ ಐದು ಸದಸ್ಯರನ್ನು ಚುನಾಯಿಸಬೇಕೆಂದು ಸೂಚಿಸುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಯಿತು.

ಶಾಸನ ರಚನೆ

1. ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ)ವಿಧೇಯಕ, 1996 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ, 1996ರ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"1996ರ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಮಂತ್ರಿಗಳು) : ಮಾನ್ಯ ಉಪಾಧ್ಯಕ್ಷರೆ, 1996ರ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

2. ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 1996 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಸಿ. ನಾಣಯ್ಯ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 1996ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ,

"1996ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಸಿ. ನಾಣಯ್ಯ (ಗ್ರಾಮೀಣಾಭಿವೃದ್ಧಿ ಮಂತ್ರಿಗಳ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ, 1996ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾರ್ಪಣೆ ಪ್ರಸ್ತಾವ

ಶ್ರೀ ಕೆ.ಎನ್. ನಾಗೇಗೌಡ (ಕಿರುಗಾವಲು ಕ್ಷೇತ್ರ) : ಮಾನ್ಯ ಉಪಾಧ್ಯಕ್ಷರೆ, ನಾನು ಈ ಕೆಳಕಂಡ ಪ್ರಸ್ತಾವವನ್ನು ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

"ದಿನಾಂಕ 19-02-96ರಂದು ವಿಧಾನ ಮಂಡಲದ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸುತ್ತೇವೆ."

ಶ್ರೀ ಕೆ. ಶರಣಪ್ಪ (ಕುಷ್ಟಗಿ ಕ್ಷೇತ್ರ) : ಮಾನ್ಯ ಉಪಾಧ್ಯಕ್ಷರೆ, ನಾನು ಪ್ರಸ್ತಾವನೆಯನ್ನು ಅನುಮೋದಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾರ್ಪಣ ಪ್ರಸ್ತಾವದ ಚರ್ಚೆ

+ಶ್ರೀ ಕೆ.ಎನ್. ನಾಗೇಗೌಡ (ಕಿರುಗಾವಲು) : ಮಾನ್ಯ ಉಪಾಧ್ಯಕ್ಷರೇ, ಫೆಬ್ರವರಿ 19ನೇ ತಾರೀಖಿನ ದಿವಸ ನಮ್ಮ ವಿಧಾನ ಮಂಡಲದಲ್ಲಿ ಮಾನ್ಯ ರಾಜ್ಯಪಾಲರು ಭಾಷಣ ಮಾಡಿದ್ದಾರೆ. ಆ ಭಾಷಣಕ್ಕೆ ವಿಧಾನಸಭೆಯ ಸದಸ್ಯರುಗಳಾದ ನಾವುಗಳೆಲ್ಲಾ ಮಾನ್ಯ ರಾಜ್ಯಪಾಲರಿಗೆ ಕೃತಜ್ಞತೆಯನ್ನು ಸಲ್ಲಿಸತಕ್ಕಂಥ ಒಂದು ಕರ್ತವ್ಯವನ್ನು ಮಾಡಬೇಕಾದ ಸಂದರ್ಭ ನಮಗೆ ಒದಗಿ ಬಂದಿದ್ದು ಬಹಳ ಸಂತೋಷ ಎಂದು ನಾನಾದರೂ ಭಾವಿಸಿಕೊಳ್ಳುತ್ತೇನೆ. ಮಾನ್ಯ ರಾಜ್ಯಪಾಲರ ಹುದ್ದೆ ಒಂದು ಗೌರವಯುತವಾದ ಹುದ್ದೆ. ಈ ರಾಜ್ಯದಲ್ಲಿ ರಾಜ್ಯಾಂಗದ ರಕ್ಷಣೆ, ಸಂಸದೀಯ ವ್ಯವಹಾರಗಳ ರಕ್ಷಣೆ ಹಾಗೂ ಸದಸ್ಯರುಗಳ ಹಕ್ಕುಗಳನ್ನು ಕಾಪಾಡತಕ್ಕಂಥ ಒಂದು ಉನ್ನತ ಸ್ಥಾನದಿಂದ ಅವರ ಭಾಷಣ ಈ ವಿಧಾನಸಭೆಗೆ ಬಹಳ ಪ್ರಯೋಜನಕಾರಿಯಾಗುತ್ತದೆಂದು ನಾನಾದರೂ ಭಾವಿಸಿಕೊಳ್ಳುತ್ತೇನೆ. ನಮ್ಮ ಸಂಸದೀಯ ವ್ಯವಸ್ಥೆಯೊಳಗೆ ಅದು ಸಂಸತ್ತು ಆಗಲಿ ಅಥವಾ ರಾಜ್ಯ ವಿಧಾನ ಸಭೆಯಾಗಲಿ, ಸಂಸತ್ತಿನಲ್ಲಿ ರಾಷ್ಟ್ರಾಧ್ಯಕ್ಷರು ಹಾಗೂ ಇಲ್ಲಿ ಮಾನ್ಯ ರಾಜ್ಯಪಾಲರು ಭಾಷಣ ಮಾಡತಕ್ಕಂಥ ಒಂದು ಪರಿಪಾಠ ಏನಿದೆ, ಅದು ನಮಗೆ ಪ್ರತಿವರ್ಷದ ಪ್ರಾರಂಭದಲ್ಲಿ ಒಂದು ದಿಕ್ಸೂಚಿಯಾಗುತ್ತದೆ, ಮುನ್ನೋಟವಾಗುತ್ತದೆ ಹಾಗೂ ಇದರಿಂದ ನಮಗೆ ಚರ್ಚೆ ಮಾಡುವುದಕ್ಕೆ ಸಾಕಷ್ಟು ಅವಕಾಶಗಳು ದೊರೆಯುತ್ತದೆಂದು ನಾನು ಭಾವಿಸಿಕೊಂಡಿದ್ದೇನೆ.